# National
# Kannada
# 25.06.2026 19.35 hrs
# ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ವೆನೆಜುವೆಲಾ: ಭೂಕಂಪಗಳ ನಂತರ ಭಾರತ ವ್ಯಕ್ತಪಡಿಸಿದ ಸಂತಾಪ ಮತ್ತು ಪರಿಹಾರ ಪ್ರಯತ್ನಗಳನ್ನು ಶ್ಲಾಘಿಸಿದ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್.
2. ಆರ್ಥಿಕ ಬೆಳವಣಿಗೆ, ಸಾಮಾಜಿಕ ಪ್ರಗತಿ ಮತ್ತು ಮಾನವ ಅಭಿವೃದ್ಧಿಗೆ ಇಂಧನದ ಪಾತ್ರ ನಿರ್ಣಾಯಕ: ಕೇಂದ್ರ ಸಚಿವ ಮನೋಹರ್ ಲಾಲ್ ಖಟ್ಟರ್.
3. ತಂತ್ರಜ್ಞಾನ ಆಧಾರಿತ ಯುದ್ಧ, ರಾಷ್ಟ್ರೀಯ ಭದ್ರತೆಯನ್ನು ಮರು ವ್ಯಾಖ್ಯಾನಿಸುತ್ತಿದೆ: ಕೇಂದ್ರ ಸಚಿವ ಜಿತೇಂದ್ರ ಸಿಂಗ್
4. ಡಿಆರ್‌ಡಿಒ ಅಭಿವೃದ್ಧಿಪಡಿಸಿದ 'ನೇತ್ರ', ವಾಯುಗಾಮಿ ಎಚ್ಚರಿಕೆ ಮತ್ತು ನಿಯಂತ್ರಣ ವ್ಯವಸ್ಥೆ: ಅಂತಿಮ ಕಾರ್ಯಾಚರಣೆಗೆ ಅನುಮತಿ
5. ಟಿ–20 ಮಹಿಳಾ ವಿಶ್ವಕಪ್ ಕ್ರಿಕೆಟ್: ಭಾರತದ ವಿರುದ್ಧ ಟಾಸ್ ಗೆದ್ದು, ಬ್ಯಾಟಿಂಗ್ ಆಯ್ದುಕೊಂಡ ಬಾಂಗ್ಲಾದೇಶ

---

ವೆನೆಜುವೆಲಾದಲ್ಲಿ ಸಂಭವಿಸಿದ ಭೂಕಂಪಗಳ ನಂತರ ಭಾರತ ವ್ಯಕ್ತಪಡಿಸಿದ ಸೌಹಾರ್ದತೆಯನ್ನು ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಶ್ಲಾಘಿಸಿದ್ದಾರೆ.

ಇದು ಕಷ್ಟದ ಸಮಯದಲ್ಲಿ ಭಾರತ ಮತ್ತು ವೆನೆಜುವೆಲಾದ ಜನರ ನಡುವಿನ ಸಹಕಾರದ ಮನೋಭಾವಕ್ಕೆ ಅನುಗುಣವಾಗಿದೆ ಎಂದು ಅವರು ಹೇಳಿದ್ದಾರೆ. ಭೂಕಂಪಗಳ ತೀವ್ರ ಪರಿಣಾಮಗಳ ಹಿನ್ನೆಲೆಯಲ್ಲಿ ತಮ್ಮ ಸಂತಾಪ ಮತ್ತು ಪರಿಹಾರ ಪ್ರಯತ್ನಗಳನ್ನು ಬೆಂಬಲಿಸಲು ಭಾರತದ ಇಚ್ಛಾಶಕ್ತಿಯನ್ನು ವ್ಯಕ್ತಪಡಿಸಿದ ಪ್ರಧಾನಿ ನರೇಂದ್ರ ಮೋದಿಯವರ ಹೇಳಿಕೆಗಳನ್ನು ಅವರು ಸ್ವಾಗತಿಸಿದ್ದಾರೆ.

ಮೋದಿ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್ ಅನ್ನು ಉಲ್ಲೇಖಿಸಿ ಅವರು, ಅಂತಾರಾಷ್ಟ್ರೀಯ ಮಟ್ಟದಲ್ಲಿ ದೊರೆತ ಬೆಂಬಲದ ಅಭಿವ್ಯಕ್ತಿಗಳನ್ನು ಶ್ಲಾಘಿಸಿದರು ಮತ್ತು ವೆನೆಜುವೆಲಾ ಸ್ವೀಕರಿಸಿದ ಒಗ್ಗಟ್ಟಿನ ಅಭಿವ್ಯಕ್ತಿಗಳಿಗೆ ಕೃತಜ್ಞತೆ ಸಲ್ಲಿಸಿದರು.

---

ಇಂಧನವು, ಆರ್ಥಿಕ ಬೆಳವಣಿಗೆ, ಸಾಮಾಜಿಕ ಪ್ರಗತಿ ಮತ್ತು ಮಾನವ ಅಭಿವೃದ್ಧಿಗೆ ನಿರ್ಣಾಯಕವಾಗಿದೆ ಎಂದು ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಖಟ್ಟರ್ ಹೇಳಿದ್ದಾರೆ.

ಗುರುಗ್ರಾಮ್‌ನಲ್ಲಿ ನಡೆದ 11ನೇ ಬ್ರಿಕ್ಸ್ ಇಂಧನ ಸಚಿವರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಅಭಿವೃದ್ಧಿ ಮತ್ತು ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಕೈಗೆಟುಕುವ, ವಿಶ್ವಾಸಾರ್ಹ ಮತ್ತು ಸುಸ್ಥಿರ ಇಂಧನವು ಅತ್ಯಗತ್ಯ ಎಂದು ತಿಳಿಸಿದರು.

ಭವಿಷ್ಯಕ್ಕೆ ಸಿದ್ಧವಾದ ವಿದ್ಯುತ್ ವಲಯವನ್ನು ನಿರ್ಮಿಸಲು ಭಾರತ ತನ್ನ ನವೀಕರಿಸಬಹುದಾದ ಇಂಧನ ಸಾಮರ್ಥ್ಯ, ಸ್ಮಾರ್ಟ್ ಗ್ರಿಡ್ ಮೂಲಸೌಕರ್ಯ ಮತ್ತು ಇಂಧನ ಸಂಗ್ರಹ ವ್ಯವಸ್ಥೆಗಳನ್ನು ವೇಗವಾಗಿ ವಿಸ್ತರಿಸುತ್ತಿದೆ. ಸೌರ ಮತ್ತು ಪವನ ಇಂಧನ ನಿಯೋಜನೆಯಲ್ಲಿ ಭಾರತವು ವಿಶ್ವದ ಪ್ರಮುಖ ರಾಷ್ಟ್ರಗಳಲ್ಲಿ ಒಂದಾಗಿ ಹೊರಹೊಮ್ಮಿದೆ ಎಂದು ಸಚಿವರು ಹೇಳಿದರು.

ಭಾರತದ ಇಂಧನ ಬೆಳವಣಿಗೆಯನ್ನು ಎತ್ತಿ ತೋರಿಸಿದ ಸಚಿವರು, ದೇಶವು ಸುಮಾರು 540 ಗಿಗಾವ್ಯಾಟ್‌ಗಳ ಸ್ಥಾಪಿತ ವಿದ್ಯುತ್ ಸಾಮರ್ಥ್ಯದೊಂದಿಗೆ ವಿಶ್ವದ ಮೂರನೇ ಅತಿದೊಡ್ಡ ವಿದ್ಯುತ್ ಉತ್ಪಾದಕ ಮತ್ತು ಗ್ರಾಹಕ ರಾಷ್ಟ್ರವಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಧ್ವನಿ: ಸಚಿವ ಮನೋಹರ್ ಲಾಲ್ ಖಟ್ಟರ್

ಬ್ರಿಕ್ಸ್ ಇಂಧನ ಸಚಿವರ ಸಭೆ ನಾಳೆಯವರೆಗೆ ಮುಂದುವರಿಯಲಿದೆ. ಇಂಧನ ಭದ್ರತೆ ಮತ್ತು ಸುಸ್ಥಿರತೆ, ಇಂಧನ ಪ್ರವೇಶ ಮತ್ತು ಸಮಾನತೆ ಹಾಗೂ ನಾವೀನ್ಯತೆ ಮುಂತಾದ ಕ್ಷೇತ್ರಗಳಲ್ಲಿ ಸಹಕಾರವನ್ನು ಬಲಪಡಿಸುವ ಬಗ್ಗೆ ಚರ್ಚೆಗಳು ಕೇಂದ್ರೀಕರಿಸುತ್ತಿವೆ.

---

ತಂತ್ರಜ್ಞಾನ ಆಧಾರಿತ ಯುದ್ಧವು ರಾಷ್ಟ್ರೀಯ ಭದ್ರತೆಯನ್ನು ಮರು ವ್ಯಾಖ್ಯಾನಿಸುತ್ತಿದೆ. ರಾಷ್ಟ್ರೀಯ ಭದ್ರತೆಯ ಭವಿಷ್ಯವು ಕೃತಕ ಬುದ್ಧಿಮತ್ತೆ, ಕ್ವಾಂಟಮ್ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ಬಾಹ್ಯಾಕಾಶ ಸಾಮರ್ಥ್ಯಗಳ ಒಮ್ಮುಖದಿಂದ ರೂಪುಗೊಳ್ಳುತ್ತದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ.

ನವದೆಹಲಿಯ ರಾಷ್ಟ್ರೀಯ ರಕ್ಷಣಾ ಕಾಲೇಜಿನಲ್ಲಿ ಮಾತನಾಡಿದ ಅವರು, ಉದಯೋನ್ಮುಖ ಭದ್ರತಾ ಸವಾಲುಗಳಿಗೆ ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಲು ಮತ್ತು ಹೆಚ್ಚುತ್ತಿರುವ ಸಂಕೀರ್ಣ ಜಾಗತಿಕ ಪರಿಸರದಲ್ಲಿ ತನ್ನ ಕಾರ್ಯತಂತ್ರದ ಹಿತಾಸಕ್ತಿಗಳನ್ನು ಭದ್ರಪಡಿಸಿಕೊಳ್ಳಲು ಭಾರತವು ತಂತ್ರಜ್ಞಾನ ರೇಖೆಗಿಂತ ಮುಂದೆ ಇರಬೇಕು ಎಂದು ತಿಳಿಸಿದರು.

---

ಭಾರತದ ರಕ್ಷಣಾ ಸ್ವಾವಲಂಬನೆಗೆ ಒತ್ತು ನೀಡುವಲ್ಲಿ ಮಹತ್ವದ ಮೈಲಿಗಲ್ಲು ಎಂಬಂತೆ, ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ- ಡಿಆರ್‌ಡಿಒ ಸ್ಥಳೀಯ 'ನೇತ್ರ' ವಾಯುಗಾಮಿ ಆರಂಭಿಕ ಎಚ್ಚರಿಕೆ ಮತ್ತು ನಿಯಂತ್ರಣ ವ್ಯವಸ್ಥೆಗೆ ಅಂತಿಮ ಕಾರ್ಯಾಚರಣೆ ಅನುಮತಿ- ಎಫ್‌ಒಸಿ ಪಡೆದಿದೆ.

ಬೆಂಗಳೂರಿನಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ, ಎಫ್‌ಒಸಿ ಪ್ರಮಾಣಪತ್ರವನ್ನು ಭಾರತೀಯ ವಾಯುಪಡೆಗೆ ಅಧಿಕೃತವಾಗಿ ಹಸ್ತಾಂತರಿಸಲಾಯಿತು,

ಮುಖ್ಯ ಅತಿಥಿಯಾಗಿ ಭಾಗವಹಿಸಿದ ಭಾರತೀಯ ವಾಯು ಪಡೆಯ, ಉಪ ಮುಖ್ಯಸ್ಥ ಏರ್ ಮಾರ್ಷಲ್ ಅವಧೇಶ್ ಕುಮಾರ್ ಭಾರ್ತಿ ಅವರು, ರಾಷ್ಟ್ರದ ವಾಯುಗಾಮಿ ಕಣ್ಗಾವಲು ಮತ್ತು ನೆಟ್‌ವರ್ಕ್-ಕೇಂದ್ರಿತ ಯುದ್ಧ ಸಾಮರ್ಥ್ಯಗಳಿಗೆ ಪ್ರಮುಖ ಬೆಳವಣಿಗೆಯನ್ನು ಖಚಿತಪಡಿಸುತ್ತದೆ ಎಂದು ಸ್ಥಳೀಯವಾಗಿ ನಿರ್ಮಿಸಲಾದ ವ್ಯವಸ್ಥೆಯನ್ನು ಶ್ಲಾಘಿಸಿದರು.

---

ಸಂಸತ್ ಭವನದಲ್ಲಿ ಇಂದು ಹೊಸದಾಗಿ ರಾಜ್ಯಸಭೆಗೆ ಚುನಾಯಿತರಾದ ಮತ್ತು ಮರು ಆಯ್ಕೆಯಾದ ಹತ್ತು ಸದಸ್ಯರಿಗೆ ಉಪರಾಷ್ಟ್ರಪತಿ ಮತ್ತು ರಾಜ್ಯಸಭೆ ಸಭಾಪತಿ ಸಿ.ಪಿ. ರಾಧಾಕೃಷ್ಣನ್ ಪ್ರಮಾಣ ವಚನ ಬೋಧಿಸಿದರು.

ತೆಲುಗು ದೇಶಂ ಪಕ್ಷದ ಸನಾ ಸತೀಶ್ ಬಾಬು, ವಿಜಯ್ ಚಿಂತಕಾಯಲ ಮತ್ತು ಭಾಷ್ಯಮ್ ರಾಮಕೃಷ್ಣ. ಆಂಧ್ರಪ್ರದೇಶದ ಜನ ಸೇನಾ ಪಕ್ಷದ ಲಿಂಗಮನೇನಿ ರಮೇಶ್ ಪ್ರಮಾಣ ವಚನ ಸ್ವೀಕರಿಸಿದರು. ಅರುಣಾಚಲ ಪ್ರದೇಶದ ಬಿಜೆಪಿಯ ತೈ ಟಗಕ್, ದೇಬಾಶಿಶ್ ಸಮಂತರಾಯ ಮತ್ತು ಕರ್ನಾಟಕದಿಂದ ಕಾಂಗ್ರೆಸ್‌ನ ಪ್ರವೀಣ್ ಚಕ್ರವರ್ತಿ ಮತ್ತು ಗುಜರಾತ್‌ನ ಬಿಜೆಪಿಯ ರಾಜೇಶ್ ಪರಮಾನಂದ್ ಶುಕ್ಲಾ ಅವರಿಗೂ ರಾಧಾಕೃಷ್ಣನ್ ಪ್ರಮಾಣ ವಚನ ಬೋಧಿಸಿದರು.

ಜಾರ್ಖಂಡ್‌ನಿಂದ ಆಯ್ಕೆಯಾದ ಜಾರ್ಖಂಡ್ ಮುಕ್ತಿ ಮೋರ್ಚಾದ ಬೈದ್ಯನಾಥ್ ರಾಮ್ ಮತ್ತು ಸ್ವತಂತ್ರ ಸದಸ್ಯ ಪರಿಮಳ್ ನಾಥ್ವಾನಿ ಕೂಡ ಪ್ರಮಾಣ ವಚನ ಸ್ವೀಕರಿಸಿದ ಇತರ ಸಚಿವರಾಗಿದ್ದಾರೆ.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದೇ 27ರಿಂದ 29ರವರೆಗೆ ಸೀಶೆಲ್ಸ್ ದೇಶಕ್ಕೆ ಭೇಟಿ ನೀಡಲಿದ್ದು, ಸೀಶೆಲ್ಸ್ ರಾಷ್ಟ್ರೀಯ ದಿನದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಪ್ರಧಾನಮಂತ್ರಿ ಅವರು 2015ರಲ್ಲಿ ಕೊನೆಯದಾಗಿ ಸೀಶೆಲ್ಸ್‌ಗೆ ಭೇಟಿ ನೀಡಿದ್ದರು.

ವಿದೇಶಾಂಗ ಸಚಿವಾಲಯದ ಹೇಳಿಕೆಯ ಪ್ರಕಾರ, ಭಾರತೀಯ ರಕ್ಷಣಾ ಪಡೆಗಳ ಒಂದು ತಂಡ ಮತ್ತು ಭಾರತೀಯ ನೌಕಾಪಡೆಯ ಎರಡು ಹಡಗುಗಳು ಈ ಆಚರಣೆಗಳಲ್ಲಿ ಭಾಗವಹಿಸಲಿವೆ.

ಭೇಟಿಯ ಸಂದರ್ಭದಲ್ಲಿ, ಪ್ರಧಾನಮಂತ್ರಿ ಮೋದಿ ಅವರು ಸೀಶೆಲ್ಸ್ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹೆರ್ಮಿನಿ ಅವರೊಂದಿಗೆ ಮಾತುಕತೆ ನಡೆಸಲಿದ್ದು, ದ್ವಿಪಕ್ಷೀಯ ಸಹಕಾರದ ವಿವಿಧ ಕ್ಷೇತ್ರಗಳನ್ನು ಪರಿಶೀಲಿಸುವ ಜೊತೆಗೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ.

ಪ್ರಧಾನಮಂತ್ರಿ ಅವರು ಸೀಶೆಲ್ಸ್ ರಾಷ್ಟ್ರೀಯ ಅಸೆಂಬ್ಲಿಯನ್ನು ಉದ್ದೇಶಿಸಿ ಭಾಷಣ ಮಾಡಲಿದ್ದು, ಭಾರತೀಯ ಮೂಲದ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ.

---

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಇಂದು ಹಿರಿಯ ರೈಲ್ವೆ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿದ್ದು, ವಿವಿಧ ಸರಕುಗಳ ಸಾಗಣೆಗೆ ಭಾರತೀಯ ರೈಲ್ವೆಯನ್ನು ಅತ್ಯಂತ ಆದ್ಯತೆಯ ಸಾರಿಗೆ ಮಾಧ್ಯಮವನ್ನಾಗಿ ರೂಪಿಸುವ ಉದ್ದೇಶದ ಸುಧಾರಣಾ ಕ್ರಮಗಳ ಕುರಿತು ಚರ್ಚೆ ನಡೆಸಲಾಗಿದೆ.

ಇತ್ತೀಚೆಗೆ ಸಿಮೆಂಟ್ ಮತ್ತು ಉಪ್ಪು ಸೇರಿದಂತೆ ವಿವಿಧ ಸರಕುಗಳಿಗಾಗಿ ಅಭಿವೃದ್ಧಿಪಡಿಸಲಾದ ವಿಶೇಷ ವ್ಯಾಗನ್‌ಗಳ ಯಶಸ್ಸು, ಕೈಗಾರಿಕೆಗಳ ಕಾರ್ಯಾಚರಣಾ ಅಗತ್ಯಗಳಿಗೆ ಅನುಗುಣವಾಗಿ ವ್ಯಾಗನ್‌ಗಳನ್ನು ವಿನ್ಯಾಸಗೊಳಿಸುವ ಮಹತ್ವವನ್ನು ಸಾಬೀತುಪಡಿಸಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಪ್ರಸ್ತಾವಿತ ವ್ಯಾಗನ್ ವಿನ್ಯಾಸ ನೀತಿಯು ಆಧುನಿಕ, ಗ್ರಾಹಕ ಕೇಂದ್ರಿತ ಹಾಗೂ ನಾವೀನ್ಯತೆ ಆಧಾರಿತ ಸರಕು ಸಾಗಣೆ ವ್ಯವಸ್ಥೆಯನ್ನು ನಿರ್ಮಿಸುವತ್ತ ಭಾರತೀಯ ರೈಲ್ವೆಯ ಮತ್ತೊಂದು ಮಹತ್ವದ ಸುಧಾರಣೆಯಾಗಿದೆ. ಇದು ಆರ್ಥಿಕ ಬೆಳವಣಿಗೆಯನ್ನು ವೇಗಗೊಳಿಸುವುದು, ಪರಿಸರ ಸುಸ್ಥಿರತೆಯನ್ನು ಬಲಪಡಿಸುವುದು ಹಾಗೂ ವಿಕಸಿತ ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸುವ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದು ಸಚಿವರು ಹೇಳಿದ್ದಾರೆ.

---

ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಪ್ರಜಾಪ್ರಭುತ್ವದ ಪರವಾಗಿ ಬೆಂಬಲ ಸೂಚಿಸಿದವರಿಗೆ ಪ್ರಧಾನಮಂತ್ರಿ ಇಂದು ಗೌರವ ಸಲ್ಲಿಸಿದರು. ದೇಶಾದ್ಯಂತ ಸಂವಿಧಾನ ಹತ್ಯಾ ದಿವಸದ ಅಂಗವಾಗಿ ಇಂದು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಪ್ರಜಾಪ್ರಭುತ್ವ, ಸಂವಿಧಾನ ಮತ್ತು ನಾಗರಿಕರ ಹಕ್ಕುಗಳನ್ನು ರಕ್ಷಿಸುವ ಬದ್ಧತೆಯನ್ನು ಪುನರುಚ್ಚರಿಸುವ ಸಂಸ್ಕೃತ ಸುಭಾಷಿತವನ್ನು ಹಂಚಿಕೊಂಡಿರುವ ಅವರು, ತುರ್ತು ಪರಿಸ್ಥಿತಿಯ ಸಮಯದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ದೃಢವಾಗಿ ಬೆಂಬಲ ಸೂಚಿಸಿ, ರಕ್ಷಿಸಿದ ಎಲ್ಲರಿಗೂ ಗೌರವ ಸಲ್ಲಿಸಿದರು.

---

ಮ್ಯಾಂಚೆಸ್ಟರ್‌ನ ಎಮಿರೇಟ್ಸ್ ಓಲ್ಡ್ ಟ್ರಾಫರ್ಡ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ಮಹಿಳಾ ಟಿ-20 ವಿಶ್ವಕಪ್ ಕ್ರಿಕೆಟ್‌ನ ಎ ಗುಂಪಿನ ಇಂದಿನ ಪಂದ್ಯದಲ್ಲಿ ಭಾರತ ಮತ್ತು ಬಾಂಗ್ಲಾದೇಶ ಮುಖಾಮುಖಿಯಾಗಿವೆ.

ಟಾಸ್ ಗೆದ್ದು, ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿರುವ ಬಾಂಗ್ಲಾದೇಶ ತಂಡ, ಇತ್ತೀಚಿನ ವರದಿ ಬಂದಾಗ 9 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 59 ರನ್ ಗಳಿಸಿ ಆಡುತ್ತಿದೆ.

ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ತಂಡ ಮೂರು ಪಂದ್ಯಗಳಲ್ಲಿ ಎರಡು ಜಯಗಳಿಸಿ ಗುಂಪಿನಲ್ಲಿ ಎರಡನೇ ಸ್ಥಾನದಲ್ಲಿದೆ. ಬಾಂಗ್ಲಾದೇಶವೂ ಎರಡು ಪಂದ್ಯಗಳನ್ನು ಗೆದ್ದಿದ್ದರೂ, ಕಡಿಮೆ ನೆಟ್ ರನ್‌ರೇಟ್‌ನಿಂದ ನಾಲ್ಕನೇ ಸ್ಥಾನದಲ್ಲಿದೆ.

---

ಕ್ಯಾಲಿಫೋರ್ನಿಯಾದ ಫುಲ್ಲರ್ಟನ್‌ನಲ್ಲಿ ನಿನ್ನೆ ನಡೆದ ಯುಎಸ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ತನ್ವಿ ಶರ್ಮಾ ಮತ್ತು ಕಿಡಂಬಿ ಶ್ರೀಕಾಂತ್ ಸುಲಭ ಗೆಲುವುಗಳೊಂದಿಗೆ ತಮ್ಮ ಅಭಿಯಾನ ಆರಂಭಿಸಿದರು.

ಮಹಿಳೆಯರ ಸಿಂಗಲ್ಸ್‌ನ ಮೊದಲ ಸುತ್ತಿನಲ್ಲಿ ತನ್ವಿ ಶರ್ಮಾ, ಜರ್ಮನಿಯ ಇವೊನ್ ಲಿ ಅವರನ್ನು 23–21, 21–16 ಅಂತರದಿಂದ ಸೋಲಿಸಿದರು. ದೇವಿಕಾ ಸಿಹಾಗ್, ಪೆರುವಿನ ಇನೆಸ್ ಲೂಸಿಯಾ ಕ್ಯಾಸ್ಟಿಲ್ಲೊ ಅವರನ್ನು 21–14, 21–14 ಅಂತರದಿಂದ ಮಣಿಸಿದರು.

__________ ಮುಕ್ತಾಯ __________